# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 679 (840) |
| ಸದಸ್ಯರ ಹೆಸರು | : | ಶ್ರೀ ಮಂಜುನಾಥ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 10.03.2026 |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು |

******

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಪೌರಾಡಳಿತ ಸಂಸ್ಥೆಗಳಲ್ಲಿ ಮಂಜೂರಾಗಿರುವ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು; ಅದರಲ್ಲಿ ಪ್ರಸ್ತುತ ಭರ್ತಿಯಾಗಿರುವ ಹುದ್ದೆಗಳು ಸಂಖ್ಯೆ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; | ರಾಜ್ಯದ ನಗರಸಭೆ, ಪುರಸಭೆ, ಹಾಗೂ ಪಟ್ಟಣ ಪಂಚಾಯಿತಿಗಳಲ್ಲಿ (ಮಹಾನಗರ ಪಾಲಿಕೆ ಹೊರತುಪಡಿಸಿ) ಒಟ್ಟು 36134 ಹುದ್ದೆಗಳು ಮಂಜೂರಾಗಿದ್ದು,16625 ಖಾಯಂ ನೌಕರರು ಕಾರ್ಯ ನಿರ್ವಹಿಸುತ್ತಿದ್ದು, 19509 ಹುದ್ದೆಗಳು ಖಾಲಿ ಇರುತ್ತದೆ. ಅದಲ್ಲದೆ ಗುತ್ತಿಗೆ, ಹೊರಗುತ್ತಿಗೆ, ನೇರಪಾವತಿ, ಸಮಾನ ಕೆಲಸಕ್ಕೆ ಸಮಾನ ವೇತನ, ದಿನಗೂಲಿ ಆಧಾರದ ಮೇಲೆ ಒಟ್ಟು 12777 ನೌಕರರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಪ್ರಸ್ತುತ 16625 ಖಾಯಂ ನೌಕರರು ಹಾಗೂ 12777 ಖಾಯಂ ಅಲ್ಲದ ನೌಕರರು ಸೇರಿ ಒಟ್ಟು 29402 ನೌಕರರು ಕಾರ್ಯನಿರ್ವಹಿಸುತ್ತಿದ್ದಾರೆ. |
| ಆ) | ಪೌರಾಡಳಿತ ಸಂಸ್ಥೆಗಳಲ್ಲಿ ಮುಖ್ಯಾಧಿಕಾರಿ ಸಹಾಯಕ ಎಂಜಿನೀಯರ್, ರೆವೆನ್ಯೂ ಇನ್ಸ್‌ಪೆಕ್ಟರ್, ಹೆಲ್ತ್ ಇನ್ಸ್‌ಪೆಕ್ಟರ್, ಎಸ್.ಡಿ.ಎ, ಬಿಲ್ ಕಲೆಕ್ಟರ್ ಸೇರಿದಂತೆ ಪ್ರಮುಖ ಹುದ್ದೆಗಳಿಗೆ ಡಬಲ್ ಚಾರ್ಜ್ ನೀಡಲಾಗಿದೆಯೇ; ಹೌದಾದಲ್ಲಿ, ಇಂತಹ ವ್ಯವಸ್ಥೆಯಿಂದ ಆಡಳಿತದ ದಕ್ಷತೆ ಹಾಗೂ ಸಾರ್ವಜನಿಕ ಸೇವೆಗೆ ವ್ಯತ್ಯಾಯ ಉಂಟಾಗುತ್ತಿರುವುದರಿಂದ ಸರ್ಕಾರ ಗಮನಿಸಿ ಯಾವ ರೀತಿಯ ಕ್ರಮಗಳನ್ನು ಕೈಗೊಂಡಿದೆ; | ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಮುಖ್ಯಾಧಿಕಾರಿ ಮತ್ತು ಅಭಿಯಂತರರು ಸೇರಿ ಇತರ ಹುದ್ದೆಗಳು ಖಾಲಿ ಇದ್ದಲ್ಲಿ, ಜಿಲ್ಲಾವ್ಯಾಪ್ತಿಯ ಇತರ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಅಧಿಕಾರಿ/ನೌಕರರನ್ನು ಜಿಲ್ಲಾಧಿಕಾರಿಗಳು ಅಧಿಕ ಪ್ರಭಾರದಲ್ಲಿ ನೇಮಿಸಿ ಆದೇಶಿಸುವುದಲ್ಲದೆ, ಅಗತ್ಯತೆಗನುಸಾರವಾಗಿ ಕೆಲವೊಮ್ಮೆ ವಾರದಲ್ಲಿ ಕೆಲವು ದಿನಗಳು ಅನ್ಯ ಸೇವೆಯ ನಿಮಿತ್ತ (ಒ.ಒ.ಡಿ.) ಕರ್ತವ್ಯ ನಿರ್ವಹಿಸಲು ಸಹ ಆದೇಶಿಸಲಾಗುತ್ತದೆ. ಈ ವ್ಯವಸ್ಥೆಯು ತಾತ್ಕಾಲಿಕವಾಗಿದ್ದು, ಇದರಿಂದಾಗಿ ಆಡಳಿತದ ದಕ್ಷತೆಯಲ್ಲಾಗಲೀ ಹಾಗೂ ಸಾರ್ವಜನಿಕ ಸೇವೆಯಲ್ಲಿಯಾಗಲೀ ಯಾವುದೇ ವ್ಯತ್ಯಯವುಂಟಾಗದಂತೆ ಕ್ರಮವಹಿಸಲಾಗುತ್ತಿದೆ. |
| ಇ) | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಪೌರಾಡಳಿತ ಸಂಸ್ಥೆಗಳಲ್ಲಿ ಮಂಜೂರಾಗಿರುವ ಒಟ್ಟು ಹುದ್ದೆಗಳ ಪೈಕಿ ಭರ್ತಿಯಾಗಿರುವ ಮತ್ತು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ವಿವಿಧ ವಿಭಾಗದಲ್ಲಿ ಖಾಯಂ, ನೇರ ಪಾವತಿ ಹಾಗೂ ಹೊರಗುತ್ತಿಗೆ ಆಧಾರದ ಸಿಬ್ಬಂದಿಗಳೆಷ್ಟು; ಸ್ವಚ್ಛತಾ ವಾಹನ ಚಾಲಕರು, ವಾಟರ್‌ಮಾನ್ಯ ಹಾಗೂ ಇತರ ಹುದ್ದೆಗಳಿಗೆ ಹೊರಗುತ್ತಿಗೆ ಸಿಬ್ಬಂದಿಯನ್ನು ನಿಯೋಜಿಸಲು ನಿಯಮಗಳಲ್ಲಿ ಅವಕಾಶವಿದೆಯೇ; | 1. ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ವ್ಯಾಪ್ತಿಯಲ್ಲಿನ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಮಂಜೂರಾದ ಹುದ್ದೆಗಳಲ್ಲಿ ಖಾಯಂ ನೌಕರರ ವೃಂದ ಬಲದ ವಿವರ ಈ ಕೆಳಕಂಡಂತಿದೆ.<br><table><tr><th>ಜಿಲ್ಲೆ</th><th>ಮಂಜೂರಾದ ಹುದ್ದೆಗಳ ಸಂಖ್ಯೆ</th><th>ಖಾಯಂ ನೌಕರರ ಸಂಖ್ಯೆ</th><th>ಖಾಲಿ ಹುದ್ದೆಗಳ ಸಂಖ್ಯೆ</th></tr><tr><td>ಉಡುಪಿ</td><td>797</td><td>397</td><td>400</td></tr><tr><td>ದಕ್ಷಿಣ ಕನ್ನಡ</td><td>1164</td><td>348</td><td>816</td></tr></table>2. ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆವಾರು ವಿವಿಧ ವಿಭಾಗದಲ್ಲಿ ದಿನಗೂಲಿ, ಕ್ಷೇಮಾಭಿವೃದ್ಧಿ, ಸಮಾನ ಕೆಲಸಕ್ಕೆ ಸಮಾನ ವೇತನ ನೇರಪಾವತಿ, ಗುತ್ತಿಗೆ, ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಹುದ್ದೆಗಳ ವಿವರವನ್ನು ಅನುಬಂಧ 1 ರಲ್ಲಿ ವಿವರಿಸಲಾಗಿದೆ. |

| | | |
|---|---|---|
| | | 3. ವೃಂದ ಮತ್ತು ನೇಮಕಾತಿ ನಿಯಮ 2010 ರನ್ವಯ ಸ್ವಚ್ಛತಾ ವಾಹನ ಚಾಲಕರು, ವಾಟರ್ ಮ್ಯಾನ್ ಹಾಗೂ ಇತರ ಹುದ್ದೆಗಳಿಗೆ ಹೊರಗುತ್ತಿಗೆ ಸಿಬ್ಬಂದಿಗಳನ್ನು ಆಯಾ ಜಿಲ್ಲಾಧಿಕಾರಿಗಳ ಹಂತದಲ್ಲಿ ನೇಮಿಸಲು ಅವಕಾಶ ಕಲ್ಪಿಸಲಾಗಿದೆ. |
| ಈ) | ಕಳೆದ ಮೂರು ವರ್ಷಗಳಲ್ಲಿ ಪೌರಾಡಳಿತ ಸಂಸ್ಥೆಗಳಲ್ಲಿ ಎಷ್ಟು ಮುಖ್ಯಾಧಿಕಾರಿಗಳು ಹಾಗೂ ಪ್ರಮುಖ ಸಿಬ್ಬಂದಿಗಳು ವರ್ಗಾವಣೆಗೊಂಡಿದ್ದಾರೆ; ಇದರಿಂದ ಈ ಸಂಸ್ಥೆಗಳ ಆಡಳಿತದಲ್ಲಿ ಉದ್ಭವವಾಗಿರುವ ತೊಂದರೆಯನ್ನು ನಿವಾರಿಸಲಾಗಿದೆಯೆ; | ಕಳೆದ ಮೂರು ವರ್ಷಗಳಲ್ಲಿ ಮುಖ್ಯಾಧಿಕಾರಿಗಳು ಹಾಗೂ ಪ್ರಮುಖ ಸಿಬ್ಬಂದಿಗಳು ವರ್ಗಾವಣೆಗೊಂಡಿರುವ ಮಾಹಿತಿಯನ್ನು ಅನುಬಂಧ ದಲ್ಲಿ ಲಗತ್ತಿಸಿದೆ. ಖಾಲಿಯಾದ ಹುದ್ದೆಗಳನ್ನು ಕಾಲ ಕಾಲಕ್ಕೆ ತಾತ್ಕಾಲಿಕವಾಗಿ ಪ್ರಭಾರ ವ್ಯವಸ್ಥೆಯನ್ನು ಮಾಡುವ ಮೂಲಕ ಉದ್ಭವವಾಗುವ ತೊಂದರೆಗಳನ್ನು ನಿವಾರಿಸಲಾಗಿರುತ್ತದೆ. |
| ಉ) | ಪೌರಾಡಳಿತ ಸಂಸ್ಥೆಗಳು ತೀವ್ರ ಸಿಬ್ಬಂದಿ ಕೊರತೆಯಿಂದ ಕಾರ್ಯನಿರ್ವಹಿಸುತ್ತಿರುವ ಅಭಿವೃದ್ಧಿ ಕಾಮಗಾರಿಗಳು ಹಾಗೂ ನಾಗರಿಕ ಸೇವೆಗಳು ಪರಿಣಾಮಕಾರಿಯಾಗಿ ನಡೆಯಲು ಸರ್ಕಾರ ತಕ್ಷಣದ ನೇಮಕಾತಿ ಅಥವಾ ಪರ್ಯಾಯ ಕ್ರಮಗಳನ್ನು ಕೈಗೊಳ್ಳಲಿದೆಯೆ; ಇದ್ದಲ್ಲಿ, ಈ ಕುರಿತಂತೆ ಯಾವ ಕಾಲಮಿತಿಯಲ್ಲಿ ಕ್ರಮ ಜರುಗಿಸಲಾಗುವುದು? | ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಸಹಿಮ 2026 ದಿನಾಂಕ: 27.02.2026ರ ಆದೇಶದಲ್ಲಿ ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು ಪೀಠದಲ್ಲಿ ದಾಖಲಿಸಿರುವ ರಿಟ್ ಅರ್ಜಿ ಸಂಖ್ಯೆ: 200448/2025ರ ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯದ ಮಧ್ಯಂತರ ಆದೇಶದಿಂದಾಗಿ ಹಲವಾರು ಇಲಾಖೆಗಳಲ್ಲಿನ ಖಾಲಿ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಸ್ಥಗಿತಗೊಂಡಿರುತ್ತದೆ. ನಿರುದ್ಯೋಗಿ ಅಭ್ಯರ್ಥಿಗಳ ಹಿತದೃಷ್ಟಿಯಿಂದ ಹಾಗೂ ಆಡಳಿತಾತ್ಮಕ ವ್ಯವಸ್ಥೆಯ ಮೇಲೆ ಪರಿಣಾಮ ಬೀರುತ್ತಿರುವುದರಿಂದ ನೇಮಕಾತಿ ಪ್ರಕ್ರಿಯೆಯನ್ನು ಮುಂದುವರೆಸಬೇಕಾಗಿರುವುದರಿಂದ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 1 ಸೇಹಿಮ 2022, ದಿನಾಂಕ: 28-12-2022ರ ಆದೇಶದ ಪೂರ್ವದಲ್ಲಿ ಜಾರಿಯಲ್ಲಿದ್ದ ಮೀಸಲಾತಿ ಆದೇಶ ಮತ್ತು ರೋಸ್ಟರ್ ಬಿಂದುಗಳಂತೆ (ಮೀಸಲಾತಿ ಪ್ರಮಾಣ ಶೇ.50ಕ್ಕೆ) ಮಾನ್ಯ ಉಚ್ಚ ನ್ಯಾಯಾಲಯದ ಅಂತಿಮ ಆದೇಶಕ್ಕೆ ಒಳಪಟ್ಟು ಖಾಲಿಯಿರುವ ನೇರ ನೇಮಕಾತಿ ಹುದ್ದೆಗಳನ್ನು ತುಂಬುವ ಪ್ರಕ್ರಿಯೆಯನ್ನು ಮುಂದಿನ 30 ದಿನಗಳಲ್ಲಿ ಪ್ರಾರಂಭಿಸುವಂತೆ ಎಲ್ಲಾ ಇಲಾಖೆಗಳಿಗೆ/ನೇಮಕಾತಿ ಪ್ರಾಧಿಕಾರಗಳಿಗೆ ತಿಳಿಸಲಾಗಿದೆ.<br><br>ಆದ್ದರಿಂದ, ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ನೇರ ನೇಮಕಾತಿಯಡಿ ಖಾಲಿ ಇರುವ ಕಿರಿಯ ಅಭಿಯಂತರರು, ಪ್ರಥಮ ದರ್ಜೆ ಕಂದಾಯ ನಿರೀಕ್ಷಕರು ಮತ್ತು ಕಿರಿಯ ಆರೋಗ್ಯ ನಿರೀಕ್ಷಕರ ಹುದ್ದೆಗಳನ್ನು ಭರ್ತಿ ಮಾಡುವ ಸಲುವಾಗಿ ಆರ್ಥಿಕ ಇಲಾಖೆ ಅನುಮೋದನೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಕ್ರಮವಹಿಸಲಾಗುವುದು.<br><br>ಇದಲ್ಲದೆ, ನಗರ ಸ್ಥಳೀಯ ಸಂಸ್ಥೆಗಳಲ್ಲಿ ಖಾಯಂ ನೌಕರರ ಕೊರತೆಯಿದ್ದಲ್ಲಿ, ಆದ್ಯತೆಗನುಸಾರ ಸ್ವಚ್ಛತಾ ಸಿಬ್ಬಂದಿಗಳನ್ನು ಜಿಲ್ಲಾಧಿಕಾರಿಗಳ ಹಂತದಲ್ಲಿ ಗುತ್ತಿಗೆ/ಹೊರಗುತ್ತಿಗೆಯಡಿ ನೇಮಕ ಮಾಡಿಕೊಳ್ಳಲು ಅವಕಾಶವಿರುತ್ತದೆ. |

ನಲಇ 24 ಎಲ್ ಸಿಕ್ಯೂ 2026(ಇ)

**(ರಹೀಂ ಖಾನ್)**
ಪೌರಾಡಳಿತ ಹಾಗೂ ಹಜ್ ಸಚಿವರು

## ಅನುಬಂಧ

### ಕಳೆದ 3 ವರ್ಷಗಳಲ್ಲಿ ಮುಖ್ಯಾಧಿಕಾರಿಗಳು ಮತ್ತು ಪ್ರಮುಖ ಸಿಬ್ಬಂದಿಗಳು ವರ್ಗಾವಣೆಗೊಂಡಿರುವ ಸಂಖ್ಯೆ

| ಹುದ್ದೆಗಳು | 2023 | 2024 | 2025 |
|---|---|---|---|
| ಮುಖ್ಯಾಧಿಕಾರಿ ಶ್ರೇಣಿ-1 | 106 | 125 | 42 |
| ಮುಖ್ಯಾಧಿಕಾರಿ ಶ್ರೇಣಿ-2 | 86 | 58 | 31 |
| ಸಮುದಾಯ ಸಂಘಟನಾಧಿಕಾರಿ | 42 | 26 | 08 |
| ವ್ಯವಸ್ಥಾಪಕರು | 26 | 34 | 55 |
| ಕಂದಾಯಾಧಿಕಾರಿ | 18 | 31 | 57 |
| ಪ್ರ.ದ.ಸ | 38 | 63 | 97 |
| ಪ್ರ.ದ.ಕಂ. ನಿರೀಕ್ಷಕರು | 6 | 9 | 7 |
| ಸಮುದಾಯ ಸಂಘಟಕರು | 3 | 7 | 11 |
| ಹಿರಿಯ ಆರೋಗ್ಯ ನಿರೀಕ್ಷಕರು | 30 | 30 | 18 |
| ಕಿರಿಯ ಆರೋಗ್ಯ ನಿರೀಕ್ಷಕರು | 18 | 18 | 77 |
| ದ್ವಿ.ದ.ಸ | 24 | 13 | 87 |
| ಸಹಾಯಕ ಅಭಿಯಂತರರು | - | 1 | 1 |
| ಪರಿಸರ ಅಭಿಯಂತರರು | 6 | 2 | 10 |
| ಕಿರಿಯ ಅಭಿಯಂತರರು | 12 | 14 | 12 |
| ಲೆಕ್ಕಾಧಿಕಾರಿ | 3 | 2 | 4 |
| ಲೆಕ್ಕಾಧೀಕ್ಷಕರು | 3 | 2 | 2 |